All India Radio: Bangalore
National Bulletin In Kannada
30.03.2026 19.35 hrs

**ಆಕಾಶವಾಣಿ, ಬೆಂಗಳೂರು**

**ರಾಷ್ಟ್ರೀಯ ವಾರ್ತೆಗಳು**

30.03.2026 19.35 hrs

***************

ಮುಖ್ಯಾಂಶಗಳು

- ಎಡಪಂಥೀಯ ಉಗ್ರವಾದ ಪೀಡಿತ ಪ್ರದೇಶಗಳ ಅಭಿವೃದ್ಧಿಗೆ ಕೇಂದ್ರ ಸರ್ಕಾರ ಪಣ - ಕೇಂದ್ರ ಗೃಹ ಸಚಿವ ಅಮಿತ್ ಶಾ
- ಲೋಕಸಭೆಯಲ್ಲಿಂದು ಇನ್ಸಾಲ್ವೆನ್ಸಿ ಮತ್ತು ದಿವಾಳಿತನ ಸಂಹಿತೆ ತಿದ್ದುಪಡಿ ಮಸೂದೆ - ೨೦೨೫ ಅಂಗೀಕಾರ
- ೨೦೨೬-೨೭ರ ಆರ್ಥಿಕ ವರ್ಷದಲ್ಲಿ ವಿಕಸಿತ ಭಾರತ ಜಿ ರಾಮ್ ಜಿ ಯೋಜನೆಗೆ ೯೫ ಸಾವಿರದ ೬೯೨ ಕೋಟಿ ರೂಪಾಯಿ ಅನುದಾನ ಮೀಸಲು - ಸಚಿವ ಕಮಲೇಶ್ ಪಾಸ್ವಾನ್
- ಐಪಿಎಲ್ ಟಿ-೨೦ ಕ್ರಿಕೆಟ್; ಚೆನ್ನೈ ಸೂಪರ್ ಕಿಂಗ್ಸ್ ವಿರುದ್ಧ ಟಾಸ್ ಗೆದ್ದ ರಾಜಸ್ಥಾನ ರಾಯಲ್ಸ್ ಫೀಲ್ಡಿಂಗ್ ಆಯ್ಕೆ

***************

ಎಡಪಂಥೀಯ ಉಗ್ರವಾದವು, ಪೀಡಿತ ಪ್ರದೇಶಗಳಲ್ಲಿ ಅಭಿವೃದ್ಧಿಯನ್ನು ನಿರ್ಬಂಧಿಸಿತ್ತು. ಆದರೆ ಈಗ ನರೇಂದ್ರ ಮೋದಿ ನೇತೃತ್ವದ ಸರ್ಕಾರದ ಅಡಿಯಲ್ಲಿ ಈ ಪ್ರದೇಶಗಳ ಅಭಿವೃದ್ಧಿಯಾಗುತ್ತಿದೆ ಎಂದು ಕೇಂದ್ರ ಗೃಹ ಸಚಿವ ಅಮಿತ್ ಶಾ ಹೇಳಿದ್ದಾರೆ.

ದೇಶವನ್ನು ಎಡಪಂಥೀಯ ಉಗ್ರವಾದದಿಂದ ಮುಕ್ತಗೊಳಿಸುವ ಪ್ರಯತ್ನಗಳ ಕುರಿತು ಲೋಕಸಭೆಯಲ್ಲಿ ನಿಯಮ ೧೯೩ ರ ಅಡಿಯಲ್ಲಿ ನಡೆದ ಚರ್ಚೆಗೆ ಅವರು ಉತ್ತರಿಸಿದರು.

೧೨ ರಾಜ್ಯಗಳಲ್ಲಿ ನಕ್ಸಲ್‌ವಾದ ಹರಡಿತ್ತು ಮತ್ತು ೨೦ ಸಾವಿರ ಜನರು ಎಡಪಂಥೀಯ ಹಿಂಸಾಚಾರದಲ್ಲಿ ಪ್ರಾಣ ಕಳೆದುಕೊಂಡರು ಎಂದು ಮಾಹಿತಿ ನೀಡಿದರು.

ನರೇಂದ್ರ ಮೋದಿ ನೇತೃತ್ವದ ಸರ್ಕಾರದಲ್ಲಿ ೩೭೦ ನೇ ವಿಧಿ ರದ್ದು, ಪೌರತ್ವ ತಿದ್ದುಪಡಿ ಕಾಯ್ದೆ, ಮಹಿಳಾ ಮೀಸಲಾತಿ ಮಸೂದೆ ಮತ್ತು ರಾಮ ಮಂದಿರ ನಿರ್ಮಾಣದಂತಹ ಹಲವಾರು ಐತಿಹಾಸಿಕ ಕ್ರಮಗಳನ್ನು ತೆಗೆದುಕೊಳ್ಳಲಾಗಿದೆ ಎಂದು ಸಚಿವ ಅಮಿತ್ ಶಾ ಹೇಳಿದರು.

ಇದಕ್ಕೂ ಮುನ್ನ ದೇಶವನ್ನು ಎಡಪಂಥೀಯ ಉಗ್ರವಾದದಿಂದ ಮುಕ್ತಗೊಳಿಸುವ ಪ್ರಯತ್ನಗಳ ಕುರಿತು ಚರ್ಚೆಯನ್ನು ಆರಂಭಿಸಿದ ಶಿವಸೇನಾ ಸಂಸದ ಶ್ರೀಕಾಂತ್ ಶಿಂಧೆ, ದೇಶವನ್ನು ನಕ್ಸಲ್ ಮುಕ್ತಗೊಳಿಸುವಲ್ಲಿ ಪ್ರಧಾನಿ ನರೇಂದ್ರ ಮೋದಿ ಸರ್ಕಾರ, ಅರೆಸೇನಾ ಪಡೆಗಳು ಮತ್ತು ಪೊಲೀಸ್ ಪಡೆಗಳ ಪ್ರಯತ್ನಗಳನ್ನು ಶ್ಲಾಘಿಸಿದರು.

***************

ಲೋಕಸಭೆಯು ಇಂದು ಧ್ವನಿ ಮತದ ಮೂಲಕ ಇನ್ಸಾಲ್ವೆನ್ಸಿ ಮತ್ತು ದಿವಾಳಿತನ ಸಂಹಿತೆ ತಿದ್ದುಪಡಿ ಮಸೂದೆ, ೨೦೨೫ ಅನ್ನು ಅಂಗೀಕರಿಸಿತು.

ಈ ಕುರಿತ ಚರ್ಚೆಗೆ ಉತ್ತರಿಸಿದ ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್, ಈ ಸಂಹಿತೆ ಕಾರ್ಯಸಾಧ್ಯವಾದ ವ್ಯವಹಾರಗಳನ್ನು ರಕ್ಷಿಸಲು, ಆರ್ಥಿಕ ಒತ್ತಡವನ್ನು ಪರಿಹರಿಸಲು ಮತ್ತು ಉದ್ಯಮ ಮೌಲ್ಯವನ್ನು ಸಂರಕ್ಷಿಸಲು ಒಂದು ಚೌಕಟ್ಟಾಗಿ ಕಾರ್ಯನಿರ್ವಹಿಸಲು ಉದ್ದೇಶಿಸಲಾಗಿದೆ ಎಂದು ಹೇಳಿದರು.

ಈ ಮಸೂದೆಯು ಒಟ್ಟು ೧೨ ತಿದ್ದುಪಡಿಗಳನ್ನು ಹೊಂದಿದೆ. ಇದರಲ್ಲಿ ಆಯ್ಕೆ ಸಮಿತಿಯು ಶಿಫಾರಸು ಮಾಡಿದ ೧೧ ಮತ್ತು ಕೇಂದ್ರ ಸರ್ಕಾರ ಪರಿಚಯಿಸಿದ ಒಂದು ತಿದ್ದುಪಡಿ ಸೇರಿವೆ ಎಂದರು.

***************

೨೦೨೬-೨೭ರ ಆರ್ಥಿಕ ವರ್ಷದಲ್ಲಿ ವಿಕಸಿತ ಭಾರತ ಜಿ ರಾಮ್ ಜಿ ಯೋಜನೆಗೆ ೯೫ ಸಾವಿರದ ೬೯೨ ಕೋಟಿ ರೂಪಾಯಿಗಳ ಅನುದಾನವನ್ನು  ನಿಗದಿಪಡಿಸಲಾಗಿದೆ ಎಂದು ಕೇಂದ್ರ ಗ್ರಾಮೀಣಾಭಿವೃದ್ಧಿ ಖಾತೆ ರಾಜ್ಯ ಸಚಿವ ಕಮಲೇಶ್ ಪಾಸ್ವಾನ್ ತಿಳಿಸಿದ್ದಾರೆ.

ರಾಜ್ಯಸಭೆಯಲ್ಲಿಂದು ಪ್ರಶ್ನೆಯೊಂದಕ್ಕೆ ಲಿಖಿತ ಉತ್ತರ ನೀಡಿದ ಸಚಿವರು, ಮನ್ರೇಗಾ ಅಡಿಯಲ್ಲಿ ೩೦ ಸಾವಿರ ಕೋಟಿ ರೂಪಾಯಿಗಳನ್ನು ಹಂಚಿಕೆ ಮಾಡಲಾಗಿದೆ. ವಿಕಸಿತ ಭಾರತ ಜಿ ರಾಮ್ ಜಿ

ಕಾಯ್ದೆ ಪ್ರಾರಂಭವಾಗುವವರೆಗೆ ಮನ್ರೇಗಾ ಅಡಿಯಲ್ಲಿನ ಹಣಕಾಸಿನ ಬದ್ಧತೆಗಳನ್ನು ಇದು ಪೂರೈಸುವ ನಿರೀಕ್ಷೆ ಇದೆ ಎಂದು ಹೇಳಿದರು.

ಕೇಂದ್ರ ಸರ್ಕಾರವು ಸೂಚಿಬಹುದಾದ ವಸ್ತುನಿಷ್ಠ ನಿಯತಾಂಕಗಳ ಆಧಾರದ ಮೇಲೆ ಪ್ರತಿ ರಾಜ್ಯಕ್ಕೆ ರಾಜ್ಯವಾರು ಪ್ರಮಾಣಿತ ಹಂಚಿಕೆಯನ್ನು ಸರ್ಕಾರ ನಿರ್ಧರಿಸುತ್ತದೆ ಎಂದು ಸಚಿವ ಕಮಲೇಶ್ ಪಾಸ್ವಾನ್ ವಿವರಿಸಿದರು.

***************

ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಅವರು ಇಂದು ಸಂಸತ್ತಿನಲ್ಲಿ ಭಾರತೀಯ ಆರ್ಥಿಕತೆಯನ್ನು ಬಲವಾಗಿ ಸಮರ್ಥಿಸಿಕೊಂಡಿದ್ದಾರೆ. ರೂಪಾಯಿ ಮೌಲ್ಯವು ಮಾರುಕಟ್ಟೆ ಆಧಾರಿತವಾಗಿದೆ. ಜಾಗತಿಕ ಅಸ್ಥಿರತೆಗಳ ಹೊರತಾಗಿಯೂ ಭಾರತದ ಸ್ಥೂಲ ಆರ್ಥಿಕತೆಯ ಮೂಲಭೂತ ಅಂಶಗಳು ಬಲವಾಗಿ ಉಳಿದಿವೆ ಎಂದು ಅವರು ಹೇಳಿದ್ದಾರೆ.

ರೂಪಾಯಿ ಅಪಮೌಲ್ಯದ ಕುರಿತು ಲೋಕಸಭೆಯಲ್ಲಿಂದು ಪೂರಕ ಪ್ರಶ್ನೆಯೊಂದಕ್ಕೆ ಉತ್ತರಿಸಿದ ಸಚಿವರು, ಭಾರತೀಯ ಆರ್ಥಿಕತೆಯ ಮೂಲಭೂತ ಅಂಶಗಳು ಬಲಿಷ್ಠವಾಗಿವೆ. ಜಾಗತಿಕ ಅಸ್ಥಿರತೆಯಿಂದಾಗಿ ಪ್ರಪಂಚಾದ್ಯಂತ ಕರೆನ್ಸಿಗಳು ಚಂಚಲತೆಯನ್ನು ಅನುಭವಿಸುತ್ತಿದೆ ಎಂದು ವಿವರಿಸಿದರು.

ಹಣದುಬ್ಬರ ಕಡಿಮೆ ಮಟ್ಟಕ್ಕೆ ಇಳಿದಿದೆ. ಜಿಡಿಪಿ ಬೆಳವಣಿಗೆ ಶೇಕಡ ೭ಕ್ಕಿಂತ ಹೆಚ್ಚಾಗಿದೆ ಮತ್ತು ಚಾಲ್ತಿ ಖಾತೆ ಕೊರತೆ ಶೇಕಡ ೧ಕ್ಕಿಂತ ಕಡಿಮೆ ಇದೆ ಎಂದು ಸಚಿವರು ತಿಳಿಸಿದರು.

ಹೆಚ್ಚಿನ ಡಾಲರ್ ಹೊರ ಹರಿವು ಸೇರಿದಂತೆ ಜಾಗತಿಕ ಏರಿಳಿತವು ವಿಶ್ವಾದ್ಯಂತ ಕರೆನ್ಸಿಗಳ ಮೇಲೆ ಪರಿಣಾಮ ಬೀರುತ್ತಿದೆ. ಭಾರತ ಸೇರಿದಂತೆ ಎಲ್ಲಾ ರಾಷ್ಟ್ರಗಳು ವಿನಿಮಯ ದರದ ಒತ್ತಡವನ್ನು ಎದುರಿಸುತ್ತಿದೆ ಎಂದು ಸಚಿವೆ ನಿರ್ಮಲಾ ಸೀತಾರಾಮನ್ ಹೇಳಿದರು.

***************

ಬ್ಯಾಂಕಿಂಗ್ ವಲಯದಲ್ಲಿ ದತ್ತಾಂಶ ಸುರಕ್ಷತೆ ಮತ್ತು ಸೈಬರ್ ಭದ್ರತೆಗೆ ಹೆಚ್ಚಿನ ಆದ್ಯತೆ ನೀಡಲಾಗಿದೆ.  ಗ್ರಾಹಕರ ಸೂಕ್ಷ್ಮ ಮಾಹಿತಿ ರಕ್ಷಣೆ, ಡಿಜಿಟಲ್ ಪಾವತಿಗಳ ಸುರಕ್ಷತೆ ಮತ್ತು ಸೈಬರ್ ದಾಳಿಗಳನ್ನು ತಡೆಯಲು ಕಠಿಣ ಭದ್ರತಾ ಕ್ರಮ ಕೈಗೊಳ್ಳಲು ಬ್ಯಾಂಕುಗಳಿಗೆ ನಿರ್ದೇಶನ ನೀಡಲಾಗಿದೆ ಎಂದು ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ತಿಳಿಸಿದ್ದಾರೆ.

ಲೋಕಸಭೆಯಲ್ಲಿಂದು ಪ್ರಶ್ನೆಯೊಂದಕ್ಕೆ ಉತ್ತರಿಸಿದ ಸಚಿವರು, ಬ್ಯಾಂಕ್‌ಗಳು ಗ್ರಾಹಕರ ದತ್ತಾಂಶ ಗೌಪ್ಯತೆಯನ್ನು ಖಚಿತಪಡಿಸಿಕೊಳ್ಳಲು ಹಾಗೂ ದತ್ತಾಂಶ ಸೋರಿಕೆಯನ್ನು ತಡೆಯಲು ಕಠಿಣ ಕ್ರಮಗಳನ್ನು ಕೈಗೊಳ್ಳಬೇಕು ಎಂದು ಇದಾಗಲೇ ಬ್ಯಾಂಕ್‌ಗಳಿಗೆ ಸೂಚನೆ ನೀಡಲಾಗಿದೆ ಎಂದರು.

'ಪ್ರವಾಸೋದ್ಯಮ ವಿಷನ್' ಕುರಿತ ಪ್ರಶ್ನೆಯೊಂದಕ್ಕೆ ಉತ್ತರಿಸಿದ ಕೇಂದ್ರ ಸಂಸ್ಕೃತಿ ಮತ್ತು ಪ್ರವಾಸೋದ್ಯಮ ಸಚಿವ ಗಜೇಂದ್ರ ಸಿಂಗ್ ಶೇಖಾವತ್, ಕೇಂದ್ರ ಸರ್ಕಾರ, ೨೦೨೯ ರ ವೇಳೆಗೆ ಪ್ರವಾಸೋದ್ಯಮ ವಿಷನ್ ಅಡಿಯಲ್ಲಿ ೫೦ ವಿಶ್ವ ದರ್ಜೆಯ ಪ್ರವಾಸಿ ತಾಣಗಳನ್ನು ಅಭಿವೃದ್ಧಿಪಡಿಸುತ್ತಿದೆ.  ಆಯ್ಕೆ ಮಾಡಲಾದ ಈ ತಾಣಗಳು ಉದ್ಯೋಗ, ಸ್ಥಳೀಯ ಆರ್ಥಿಕತೆಗಳನ್ನು ಹೆಚ್ಚಿಸುವ ಮತ್ತು ಅಂತಾರಾಷ್ಟ್ರೀಯ ಸಂದರ್ಶಕರನ್ನು ಆಕರ್ಷಿಸುವ ಗುರಿಯನ್ನು ಹೊಂದಿವೆ ಎಂದು ಹೇಳಿದರು.

***************

ಪಶ್ಚಿಮ ಏಷ್ಯಾ ಸಂಘರ್ಷದ ನಡುವೆಯೂ ದೇಶದಲ್ಲಿ ಸಾಕಷ್ಟು ರಸಗೊಬ್ಬರಗಳ ದಾಸ್ತಾನಿದೆ ಎಂದು ಕೇಂದ್ರ ಸರ್ಕಾರ ಭರವಸೆ ನೀಡಿದೆ.

ನವದೆಹಲಿಯಲ್ಲಿ ಇಂದು ಪತ್ರಿಕಾಗೋಷ್ಠಿ ಉದ್ದೇಶಿಸಿ ಮಾತನಾಡಿದ ರಸಗೊಬ್ಬರಗಳ ಇಲಾಖೆಗಳ ಹೆಚ್ಚುವರಿ ಕಾರ್ಯದರ್ಶಿ ಅಪರ್ಣಾ ಶರ್ಮಾ, ದೇಶದ ಯೂರಿಯಾ ಘಟಕಗಳು ಪ್ರಸ್ತುತ ಶೇಕಡ ೮೦ರ ಸಾಮರ್ಥ್ಯದಲ್ಲಿ ಯೂರಿಯಾ ಉತ್ಪಾದಿಸುತ್ತಿದೆ. ಮುಂಗಾರು ಋತುವಿನಲ್ಲಿ ದೇಶಕ್ಕೆ ೩೯೦ ಟನ್ ರಸಗೊಬ್ಬರಗಳ ಅಗತ್ಯವಿದೆ ಎಂದು ಮಾಹಿತಿ ನೀಡಿದರು.

ರಸಗೊಬ್ಬರಗಳ ಆಮದು ಮತ್ತು ದೇಶೀಯ ಯೂರಿಯಾ ಉತ್ಪಾದನೆಗೆ ನಿರ್ಣಾಯಕವಾದ ಗಲ್ಫ್ ಪ್ರದೇಶಗಳಲ್ಲಿ ಸಂಘರ್ಷದ ಕಾರಣ ಆರಂಭದಲ್ಲಿ ಪರಿಣಾಮ ಬೀರಿತ್ತು. ಆದರೆ, ದೇಶದಲ್ಲಿ ಮುಂಗಾರು ಋತುವಿಗೆ ಸಾಕಷ್ಟು ದಾಸ್ತಾನು ಲಭ್ಯವಿದೆ ಎಂದು ಅವರು ತಿಳಿಸಿದರು.

***************

ದೇಶದಲ್ಲಿ ಪೆಟ್ರೋಲ್, ಡಿಸೇಲ್, ಎಲ್‌ಪಿಜಿ ಮತ್ತು ಪಿಎನ್‌ಜಿ ಸಾಕಷ್ಟ ಲಭ್ಯವಿದೆ ಎಂದು ಪೆಟ್ರೋಲಿಯಂ ಮತ್ತು ನೈಸರ್ಗಿಕ ಅನಿಲ ಸಚಿವಾಲಯದ ಜಂಟಿ ಕಾರ್ಯದರ್ಶಿ ಸುಜಾತಾ ಶರ್ಮಾ ತಿಳಿಸಿದ್ದಾರೆ.

ನವದೆಹಲಿಯಲ್ಲಿ ಇಂದು ಪತ್ರಿಕಾಗೋಷ್ಠಿ ಉದ್ದೇಶಿಸಿ ಮಾತನಾಡಿದ ಅವರು, ದೇಶದಲ್ಲಿ ಇಂಧನ ದಾಸ್ತಾನು ಖಚಿತಪಡಿಸಿಕೊಳ್ಳಲು ಸರ್ಕಾರ ಹಲವಾರು ಕ್ರಮಗಳನ್ನು ತೆಗೆದುಕೊಂಡಿದ್ದು, ಅದನ್ನು ಮುಂದುವರೆಸುತ್ತದೆ. ದೇಶದ ಸಂಸ್ಕರಣಾಗಾರಗಳು ಸಾಮಾನ್ಯವಾಗಿ ಕಾರ್ಯನಿರ್ವಹಿಸುತ್ತಿವೆ. ಕಚ್ಚಾ ತೈಲ ದಾಸ್ತಾನು ಸಾಕಷ್ಟಿವೆ ಎಂದು ಅವರು ಮಾಹಿತಿ ನೀಡಿದ್ದಾರೆ.

ದೇಶೀಯ ಮಾರುಕಟ್ಟೆಯಲ್ಲಿ ಬೆಲೆ ಏರಿಕೆಯನ್ನು ತಡೆಯಲು ಕೇಂದ್ರ ಸರ್ಕಾರ ಪೆಟ್ರೋಲ್ ಮತ್ತು ಡಿಸೇಲ್ ಮೇಲಿನ ಅಬಕಾರಿ ಸುಂಕವನ್ನು ೧೦ ರೂಪಾಯಿಯಷ್ಟು ಕಡಿಮೆ ಮಾಡಿದೆ ಎಂದು ಸುಜಾತಾ ಶರ್ಮಾ ಹೇಳಿದ್ದಾರೆ.

***************

ದೇಶದಲ್ಲಿ ಕಲ್ಲಿದ್ದಲು ಆಧಾರಿತ ಸ್ಥಾವರಗಳಲ್ಲಿ ೫೮ ದಶಲಕ್ಷ ಟನ್‌ಗಳಿಗೂ ಹೆಚ್ಚು ಕಲ್ಲಿದ್ದಲು ದಾಸ್ತಾನು ಇದೆ ಎಂದು ಕೇಂದ್ರ ಇಂಧನ ಖಾತೆ ರಾಜ್ಯ ಸಚಿವ ಶ್ರೀಪಾದ್ ನಾಯಕ್ ತಿಳಿಸಿದ್ದಾರೆ.

ರಾಜ್ಯಸಭೆಯಲ್ಲಿಂದು ಪ್ರಶ್ನೆಯೊಂದಕ್ಕೆ ಲಿಖಿತ ಉತ್ತರ ನೀಡಿದ ಅವರು, ಬೇಸಿಗೆ ಕಾಲದಲ್ಲಿ ಹೆಚ್ಚುತ್ತಿರುವ ವಿದ್ಯುತ್ ಬೇಡಿಕೆಯನ್ನು ಗಮನದಲ್ಲಿಟ್ಟಿಕೊಂಡು ಕಲ್ಲಿದ್ದಲಿನ ಸಮರ್ಪಕ ಲಭ್ಯತೆ ಮತ್ತು ಪೂರೈಕೆಯನ್ನು ಖಚಿತಪಡಿಸಿಕೊಳ್ಳಲು ಸರ್ಕಾರ ವಿವಿಧ ಕ್ರಮಗಳನ್ನು ತೆಗೆದುಕೊಂಡಿದೆ ಎಂದು ಹೇಳಿದರು.

ವಿದ್ಯುತ್ ವಲಯಕ್ಕೆ ಕಲ್ಲಿದ್ದಲು ಪೂರೈಕೆಯ ಸಮಸ್ಯೆಗಳನ್ನು ಬಗೆಹರಿಸಲು ಅಂತರ್ ಸಚಿವಾಲಯ ಸಭೆಗಳನ್ನು ಕಾಲ ಕಾಲಕ್ಕೆ ನಡೆಸಲಾಗುವುದು. ಪರಿಷ್ಕೃತ ಶಕ್ತಿ ನೀತಿ ೨೦೨೫ರ ಅಡಿಯಲ್ಲಿ ಉಷ್ಣ ವಿದ್ಯುತ್ ಸ್ಥಾವರಗಳಿಗೆ ಹೊಸದಾಗಿ ಕಲ್ಲಿದ್ದಲು ಸಂಪರ್ಕಗಳನ್ನು ನೀಡಲು ಕ್ರಮ ಕೈಗೊಳ್ಳಲಾಗಿದೆ ಎಂದು ಸಚಿವ ಶ್ರೀಪಾದ್ ನಾಯಕ್ ಮಾಹಿತಿ ನೀಡಿದರು.

***************

ಗುವಾಹಟಿಯ ಬರ್ಸಾಪುರ ಕ್ರಿಕೆಟ್ ಕ್ರೀಡಾಂಗಣದಲ್ಲಿ ಇಂದು ನಡೆಯುತ್ತಿರುವ ಇಂಡಿಯನ್ ಪ್ರೀಮಿಯರ್ ಲೀಗ್-ಐಪಿಎಲ್ ಟಿ-೨೦ ಕ್ರಿಕೆಟ್ ಪಂದ್ಯದಲ್ಲಿ ರಾಜಸ್ಥಾನ ರಾಯಲ್ಸ್ ಮತ್ತು ಚೆನ್ನೈ ಸೂಪರ್ ಕಿಂಗ್ಸ್ ಮುಖಾಮುಖಿಯಾಗಿವೆ.

ಟಾಸ್ ಗೆದ್ದ ರಾಜಸ್ಥಾನ ರಾಯಲ್ಸ್ ತಂಡ ಫೀಲ್ಡಿಂಗ್ ಆಯ್ಕೆ ಮಾಡಿಕೊಂಡಿದೆ.

***************

ಜನಗಣತಿಯ ಸಿದ್ಧತೆಗಳು ಭರದಿಂದ ಸಾಗಿದ್ದು, ಕೆಲವೇ ದಿನಗಳಲ್ಲಿ, ಹಲವಾರು ರಾಜ್ಯಗಳಲ್ಲಿ ಮೊದಲ ಹಂತದ ಕ್ಷೇತ್ರಕಾರ್ಯ ಮತ್ತು ವಸತಿ ಗಣತಿ ಪ್ರಾರಂಭವಾಗಲಿದೆ ಎಂದು ರಿಜಿಸ್ಟ್ರಾರ್ ಜನರಲ್ ಮತ್ತು ಜನಗಣತಿ ಆಯುಕ್ತ ಮೃತ್ಯುಂಜಯ್ ಕುಮಾರ್ ನಾರಾಯಣ್ ಹೇಳಿದ್ದಾರೆ.

*******ಮುಕ್ತಾಯ********